ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1515
2. ಸದಸ್ಯರ ಹೆಸರು : ಶ್ರೀ. ಕೆ.ಪಿ.ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 19-03-2020
4. ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಜಿಲ್ಲೆಗಳ (Aspirational District) ಯೋಜನೆಯಡಿ ರಾಜ್ಯದಲ್ಲಿ ಶೈಕ್ಷಣಿಕ, ಆರೋಗ್ಯ ರಕ್ಷಣೆ (Health Care) ಮತ್ತು ಮೂಲಭೂತ ಸೌಕರ್ಯ (Infrastructure) ಕಲ್ಪಿಸುವ ಅಭಿವೃದ್ಧಿ ಕಾಮಗಾರಿಗಳಿಗೆ ಗುರುತಿಸಿರುವ ರಾಜ್ಯದ ಹಿಂದುಳಿದ ಜಿಲ್ಲೆಗಳು ಯಾವುವು;	ಈ ಯೋಜನೆಯಡಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳು ಒಳಪಟ್ಟಿರುತ್ತದೆ.
ಆ)	ರಾಜ್ಯದಲ್ಲಿ ಈ ಯೋಜನೆಯಡಿ ಆಯ್ಕೆಯಾಗಿರುವ ಜಿಲ್ಲೆಗಳು ಯಾವುವು; (ಪೂರ್ಣ ವಿವರ ನೀಡುವುದು).	ಈ ಯೋಜನೆಯಡಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳು ಆಯ್ಕೆಯಾಗಿರುತ್ತದೆ.
ಇ)	ಈ ಯೋಜನೆಯಡಿ ಆಯ್ದ ಜಿಲ್ಲೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಒದಗಿಸಿರುವ ಅನುದಾನವೆಷ್ಟು; ಈ ಕಾಮಗಾರಿಗಳ ಪ್ರಗತಿ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು	**ರಾಯಚೂರು ಜಿಲ್ಲೆ:** ಈ ಯೋಜನೆಗೆ ಪ್ರತ್ಯೇಕ ಅನುದಾನ ನಿಗಧಿಪಡಿಸಿರುವುದಿಲ್ಲ, ಬದಲಾಗಿ ಶಿಕ್ಷಣ, ಆರೋಗ್ಯ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯೋಜನೆಗಳೊಂದಿಗೆ Convergence ಮೂಲಕ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. **ಯಾದಗಿರಿ ಜಿಲ್ಲೆ:** 1. ಯಾದಗಿರಿ ನಗರದಲ್ಲಿ ವೈದ್ಯಕೀಯ ಕಾಲೇಜು ಮಂಜೂರಿಯಾಗಿರುತ್ತದೆ. 2. ಶಹಾಪುರ ನಗರದಲ್ಲಿ ವಸತಿ ಮಾದರಿ ಪದವಿ ಕಾಲೇಜು ಮಂಜೂರಿಯಾಗಿರುತ್ತದೆ. 3. ಯಾದಗಿರಿ ಜಿಲ್ಲೆಯಲ್ಲಿ ಭಾರತೀಯ ಜೈನ್ ಸಂಘಟನೆ ಹಾಗೂ ಶ್ರೀಕ್ಷೇತ್ರ ಧರ್ಮಸ್ಥಳ ಇವರ ಸಹಭಾಗಿತ್ವದಲ್ಲಿ ಕೆರೆ ಹೂಳೆತ್ತುವ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ.

ಕ್ರ.ಸಂ	ಪ್ರಶ್ನೆ	ಉತ್ತರ
		4. ಅಟಲ್ ಜ್ಯೋತಿ ಯೋಜನೆಯು ಯಾದಗಿರಿ ಜಿಲ್ಲೆಯ ಮಾನ್ಯ ಸಂಸದರ ಕ್ಷೇತ್ರಕ್ಕೆ ಒಳಪಡುವ ಹಳ್ಳಿಗಳಲ್ಲಿ ಸೋಲಾರ್ ಬೀದಿ ದೀಪಗಳನ್ನು ಅಳವಡಿಸಲು ಈಗಾಗಲೇ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಿದ್ದು, ಬೀದಿ ದೀಪಗಳನ್ನು ಅಳವಡಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. 5. ಸಾರ್ವಜನಿಕ ವಲಯದ ಉದ್ಯಮಗಳನ್ನು ಅಭಿವೃದ್ಧಿ ಮೂಲಕ ಯಾದಗಿರಿ ಜಿಲ್ಲೆಗೆ BEL, MRPL, CCI, ANTRIX Corporation & HPCL ವತಿಯಿಂದ ನಿಧಿಯನ್ನು ನಿಗದಿಪಡಿಸಲಾಗಿದೆ. 6. ಯಾದಗಿರಿ ಜಿಲ್ಲೆಗೆ ನೀತಿ ಆಯೋಗದಿಂದ ರೂ:3.00 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ.

ಸಂಖ್ಯೆ:ಪಿಡಿಎಸ್ 7 ಐಪಿಆರ್ 2020

(ಬಿ.ಎಸ್.ಯಡಿಯೂರಪ್ಪ)

ಮಾನ್ಯ ಮುಖ್ಯ ಮಂತ್ರಿಗಳು